**ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾಯವರ ನ್ಯಾಯಾಲಯ, ಹುಣಸೂರು.**

**ಸಿ.ಸಿ. 8/2019**

ಫಿರ್ಯಾದುದಾರರುಃ ಕೆ.ಮೋಹನ್ , ಬಿನ್ ಲೇಟ್ ಕಂದಸ್ವಾಮಿ,
ಸುಮಾರು 57 ವರ್ಷ
ವಾಸಃ ಶ್ರೀ ನರಸಿಂಹಸ್ವಾಮಿ ದೇವಸ್ಥಾನದ ಹಿಂಭಾಗ,
ಎನ್.ಎಸ್.ತಿಟ್ಟು, ಹುಣಸೂರು.

ವಿರುದ್ಧ

ಆರೋಪಿಃ ಶಾರುಖ್ ಬಿನ್ ಬಾಬು,
ವಾಸಃ ರಾಜೀವ್ ಗಾಂಧಿ ನಗರ,
ಕೆ.ಎಸ್.ಆರ್.ಟಿ.ಸಿ.ಡಿಪೋ ಹತ್ತಿರ ,
ಬಿ.ಎಮ್. ರಸ್ತೆ ,ಹುಣಸೂರು.

**ದಂಡ ಪ್ರಕ್ರಿಯೆ ಸಂಹಿತೆ ಕಲಂ 313 ರ ಅಡಿ ಆರೋಪಿಯ ಹೇಳಿಕೆ**

1. ಈ ಕೇಸಿನಲ್ಲಿ ನ್ಯಾಯಾಲಯದ ಮುಂದೆ ವಿಚಾರಣೆ ಮಾಡಿದ ಸಾಕ್ಷಿಯ ಹೇಳಿಕೆಯನ್ನು ಕೇಳಿದ್ದೀರಾ?

ಉತ್ತರಃ

2. ಫ್ರಾಸಾ1-ಕೆ. ಮೋಹನ್ ರವರು ತಮ್ಮ ಪ್ರಮಾಣಪತ್ರ/ಸಾಕ್ಷ್ಯದಲ್ಲಿ, ಆರೋಪಿಯಾದ ನೀವು, ಫಿಯಾರ್ದುದಾರರಿಂದ ನಿಮ್ಮ ಕಾನೂನುಬದ್ಧ ಅವಶ್ಯಕತೆಗಾಗಿ ದಿನಾಂಕ 24.08.2017 ರಂದು ರೂ.75,000/-ಹಣವನ್ನು ಸಾಲವಾಗಿ ಪಡೆದು, ಸದರಿ ಸಾಲದ ಹಣವನ್ನು ಮರುಪಾವತಿಸಲು 24.09.2017 ದಿನಾಂಕ ಇರುವ ಹುಣಸೂರು ಶಾಖೆಯ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಚೆಕ್ ಸಂಖ್ಯೆ .425491 ಯುಳ್ಳ ರೂ.75,000/- ಗಳ ಚೆಕ್ಕನ್ನು ನೀಡಿದ್ದು, ಸದರಿ ಚೆಕ್ಕನ್ನು ಫಿಯಾರ್ದುದಾರರು ಹುಣಸೂರು ಶಾಖೆಯ ಕಾವೇರಿ ಗ್ರಾಮೀಣ ಬ್ಯಾಂಕ್ ಗೆ ಹಾಜರುಪಡಿಸಿದಾಗ, ನಿಮ್ಮ

ಖಾತೆಯಲ್ಲಿ "Funds Insufficient" ಎಂಬ ಹಿಂಬರಹದೊಂದಿಗೆ ಮಾನ್ಯವಾಗದೆ ವಾಪಸ್ಸಾಗಿರುತ್ತದೆ ಎಂದು ಫ್ರಾಸಾ1 ರವರು ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುವಿರಿ?

ಉತ್ತರಃ

3. ಫ್ರಾಸಾ1 ರವರು ತಮ್ಮ ಪ್ರಮಾಣಪತ್ರ / ಸಾಕ್ಷ್ಯದಲ್ಲಿ, ಸದರಿ ವಿಷಯದ ಬಗ್ಗೆ ಫಿರ್ಯಾದುದಾರರು ನಿಮಗೆ ತಮ್ಮ ವಕೀಲರ ಮುಖಾಂತರ ದಿನಾಂಕ 08.01.2018 ರಂದು ಅಂಚೆ ಮೂಲಕ ನೋಟೀಸನ್ನು ಕಳುಹಿಸಿದ್ದು, ಸದರಿ ನೋಟೀಸು ನಿಮಗೆ ಜಾರಿಯಾಗಿದ್ದರೂ ಅದಕ್ಕೆ ಉತ್ತರನ್ನು ನೀಡಿರುವುದಿಲ್ಲ ಹಾಗೂ ಹಣವನ್ನು ಹಿಂದಿರುಗಿಸಿರುವುದಿಲ್ಲ ಎಂದು ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುವಿರಿ?

ಉತ್ತರಃ

4. ಫ್ರಾಸಾ1 ರವರು ತಮ್ಮ ಪ್ರಮಾಣಪತ್ರ / ಸಾಕ್ಷ್ಯದಲ್ಲಿ, ಆರೋಪಿಯಾದ ನೀವು ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲದೇ ಇದ್ದರೂ ಸಹ ಅವರಿಗೆ ಮೋಸ ಮಾಡುವ ಉದ್ದೇಶದಿಂದ, ಚೆಕ್ಕನ್ನು ನೀಡಿರುತ್ತೀರಿ ಎಂದು ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುವಿರಿ?

ಉತ್ತರ –

5. ನಿಮ್ಮ ಪರ ಸಾಕ್ಷಿಗಳಿವೆಯೇ?

ಉತ್ತರಃ

6. ನೀವು ಹೆಚ್ಚಿಗೆ ಹೇಳುವುದು ಏನಾದರೂ ಇದೆಯೇ?

ಉತ್ತರಃ

ಮೇಲ್ಕಂಡ ಆರೋಪಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿದ್ದು, ಆರೋಪಿಯು ನೀಡಿದ ಉತ್ತರವನ್ನು ಹಾಗೆಯೇ ದಾಖಲಿಸಿಕೊಳ್ಳಲಾಗಿದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ.

(ಶಿರಿನ್ ಜಾವೀದ್ ಅನ್ಸಾರಿ)
ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು
ಹಾಗೂ ಪ್ರ.ದ.ನ್ಯಾ..ದಂಡಾಧಿಕಾರಿಗಳು, ಹುಣಸೂರು.